# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 2(118)

ಸದಸ್ಯರ ಹೆಸರು : ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನ ಸಭೆಯಿಂದ ಚುನಾಯಿತರಾದವರು)

ಉತ್ತರಿಸುವ ದಿನಾಂಕ : 19-12-2022

ಉತ್ತರಿಸುವ ಸಚಿವರು : ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಹಾಗೂ ಸಕಾಲ ಸಚಿವರು

| ಕ್ರಮ ಸಂಖ್ಯೆ | ಪ್ರಶ್ನೆ | ಉತ್ತರ |
|---|---|---|

**ಅ)** ಸರ್ಕಾರಿ/ಖಾಸಗಿ ಪದವಿ ಪೂರ್ವ ಕಾಲೇಜುಗಳಲ್ಲಿ ಮಂಜೂರಾದ ಹುದ್ದೆಗಳೆಷ್ಟು; ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಹುದ್ದೆ ಮತ್ತು ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು; (ವಿವರ ನೀಡುವುದು)

1. ರಾಜ್ಯದ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಮಂಜೂರಾದ, ಕಾರ್ಯ ನಿರ್ವಹಿಸುತ್ತಿರುವ ಹಾಗೂ ಖಾಲಿಯಿರುವ ವೃಂದವಾರು ಹುದ್ದೆಗಳ ವಿವರ ಈ ಕೆಳಕಂಡಂತಿದೆ-

| ಕ್ರ. ಸಂ | ವೃಂದ | ಮಂಜೂರಾದ ಹುದ್ದೆಗಳ ಸಂಖ್ಯೆ | ಕಾರ್ಯ ನಿರ್ವಹಿಸುತ್ತಿರುವ ಹುದ್ದೆಗಳ ಸಂಖ್ಯೆ | ಖಾಲಿ ಇರುವ ಹುದ್ದೆಗಳ ಸಂಖ್ಯೆ |
|---|---|---|---|---|
| 1 | ಎ | 1220 | 795 | 425 |
| 2 | ಬಿ | 12878 | 8917 | 3961 |
| 3 | ಸಿ | 1374 | 671 | 703 |
| 4 | ಡಿ | 966 | 150 | 816 |

2. ರಾಜ್ಯದ ಖಾಸಗಿ ಅನುದಾನಿತ ಪದವಿ ಪೂರ್ವ ಕಾಲೇಜುಗಳಲ್ಲಿ ಮಂಜೂರಾದ, ಕಾರ್ಯ ನಿರ್ವಹಿಸುತ್ತಿರುವ ಹಾಗೂ ಖಾಲಿಯಿರುವ ವೃಂದವಾರು ಹುದ್ದೆಗಳ ವಿವರ ಈ ಕೆಳಕಂಡಂತಿದೆ-

| ಕ್ರ. ಸಂ | ವೃಂದ | ಮಂಜೂರಾದ ಹುದ್ದೆಗಳ ಸಂಖ್ಯೆ | ಕಾರ್ಯ ನಿರ್ವಹಿಸುತ್ತಿರುವ ಹುದ್ದೆಗಳ ಸಂಖ್ಯೆ | ಖಾಲಿ ಇರುವ ಹುದ್ದೆಗಳ ಸಂಖ್ಯೆ |
|---|---|---|---|---|
| 1 | ಎ | 523 | 247 | 276 |
| 2 | ಬಿ | 7769 | 4428 | 3341 |
| 3 | ಸಿ | 1205 | 592 | 613 |
| 4 | ಡಿ | 1451 | 708 | 743 |

**ಆ)** ಖಾಲಿ ಇರುವ ಹುದ್ದೆಗಳನ್ನು ಯಾವ ಮಾನದಂಡ ಅನುಸರಿಸಿ ಅತಿಥಿ ಉಪನ್ಯಾಸಕರನ್ನು ನೇಮಿಸಿಕೊಳ್ಳಲಾಗುತ್ತಿದೆ; (ವಿವರ ನೀಡುವುದು)

ಸರ್ಕಾರದ ಆದೇಶ ಸಂಖ್ಯೆ: ಇಡಿ 72 ಎಸ್‌ಟಿಬಿ 2016 ದಿನಾಂಕ:04-07-2016ರ ಆದೇಶದನ್ವಯ ಹಾಗೂ ಈ ಕೆಳಕಂಡ ಷರತ್ತಿನನ್ವಯ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಖಾಲಿಯಿರುವ ಉಪನ್ಯಾಸಕರ ಹುದ್ದೆಗೆ ಅತಿಥಿ ಉಪನ್ಯಾಸಕರನ್ನು ನೇಮಿಸಿಕೊಳ್ಳಲಾಗುತ್ತಿದೆ:

- ಸರ್ಕಾರಿ ಪದವಿ ಪೂರ್ವ ಕಾಲೇಜುಗಳಿಗೆ ಅತಿಥಿ ಉಪನ್ಯಾಸಕರ ಆಯ್ಕೆ ಜವಾಬ್ದಾರಿಯನ್ನು ಸಂಬಂಧಿಸಿದ ಜಿಲ್ಲಾ ಉಪ ನಿರ್ದೇಶಕರಿಗೆ ವಹಿಸಲಾಗಿದ್ದು, ಜಿಲ್ಲಾ ಉಪ ನಿರ್ದೇಶಕರ ಹಂತದಲ್ಲಿಯೇ ಕೊರತೆ ಇರುವ ಉಪನ್ಯಾಸಕರ ಹುದ್ದೆಗಳಿಗೆ ಅತಿಥಿ ಉಪನ್ಯಾಸಕರನ್ನು ನೇಮಿಸಿಕೊಳ್ಳಲು ಅವಕಾಶ ಕಲ್ಪಿಸಲಾಗಿದೆ.
- ಅತಿಥಿ ಉಪನ್ಯಾಸಕರನ್ನು ಆಯಾ ವಿಷಯವಾರು ಹುದ್ದೆಗೆ ನಿಗದಿಪಡಿಸಿದ ಕನಿಷ್ಠ ವಿದ್ಯಾರ್ಹತೆಯನ್ನು ಪರಿಗಣಿಸಿ, ಮೆರಿಟ್ ಆಧಾರದಲ್ಲಿ ಆಯ್ಕೆ ಮಾಡಲಾಗುವುದು.

| | | |
|---|---|---|
| ಇ) | ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು? (ಕಳೆದ 5 ವರ್ಷಗಳ ಮಾಹಿತಿ ನೀಡುವುದು) | ಕಳೆದ 05 ವರ್ಷಗಳಲ್ಲಿ ಸರ್ಕಾರಿ/ಖಾಸಗಿ ಅನುದಾನಿತ ಪದವಿ ಪೂರ್ವ ಕಾಲೇಜುಗಳಲ್ಲಿ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಕೈಗೊಂಡಿರುವ ಕ್ರಮಗಳು ಈ ಕೆಳಕಂಡಂತಿವೆ–<br>• 2020ರಲ್ಲಿ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಖಾಲಿ ಇದ್ದ 1203 ಉಪನ್ಯಾಸಕರ ಹುದ್ದೆಗಳಿಗೆ ನೇಮಕಾತಿ ಆದೇಶವನ್ನು ಹೊರಡಿಸಲಾಗಿರುತ್ತದೆ. ಈ ಪೈಕಿ ಕರ್ತವ್ಯಕ್ಕೆ ವರದಿ ಮಾಡಿಕೊಳ್ಳದ 48 ಉಪನ್ಯಾಸಕರ ಹುದ್ದೆಗಳನ್ನು ಭರ್ತಿ ಮಾಡಲು ಕ್ರಮವಹಿಸಲಾಗಿದೆ.<br>• ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ನೇರ ನೇಮಕಾತಿ ಕೋಟಾದಡಿ ಖಾಲಿ ಇರುವ 255 ಪ್ರಾಂಶುಪಾಲರ ಹುದ್ದೆಗಳ ಆಯ್ಕೆ ಪ್ರಕ್ರಿಯೆಯನ್ನು ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಮುಖಾಂತರ ಕೈಗೊಳ್ಳಲಾಗಿದೆ.<br>• ಪ್ರಸ್ತುತ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಖಾಲಿಯಿರುವ 814 ಉಪನ್ಯಾಸಕರ ಹುದ್ದೆಗಳನ್ನು ಭರ್ತಿ ಮಾಡಲು ಅನುಮತಿ ನೀಡಲಾಗಿದೆ.<br>• ಖಾಲಿ ಇರುವ 20 ದೈಹಿಕ ಶಿಕ್ಷಣ ಉಪನ್ಯಾಸಕರ ಹುದ್ದೆಗಳ ಪೈಕಿ 10 ಹುದ್ದೆಗಳನ್ನು ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಮುಖಾಂತರ ಭರ್ತಿ ಮಾಡಲು ಕ್ರಮವಹಿಸಲಾಗಿದೆ. 10 ಹುದ್ದೆಗಳಿಗೆ ಬಡ್ತಿ ನೀಡಲು ಸಾರ್ವಜನಿಕ ಶಿಕ್ಷಣ ಇಲಾಖೆಯಿಂದ ಅರ್ಹ ದೈಹಿಕ ಶಿಕ್ಷಕರುಗಳ ಮಾಹಿತಿ/ದಾಖಲೆಗಳನ್ನು ಪಡೆಯಲು ಕ್ರಮವಹಿಸಲಾಗಿದೆ.<br>• ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ಖಾಲಿ ಇರುವ 10 ಗ್ರಂಥಪಾಲಕರ ಹುದ್ದೆಗಳಿಗೆ ಆಯ್ಕೆ ಪ್ರಕ್ರಿಯೆಯನ್ನು ಕೈಗೊಂಡಿರುತ್ತದೆ.<br>• ನೇರ ನೇಮಕಾತಿಯಡಿ ಖಾಲಿ ಇರುವ 60 ಪ್ರಥಮ ದರ್ಜೆ ಸಹಾಯಕರು ಹಾಗೂ 240 ದ್ವಿತೀಯ ದರ್ಜೆ ಸಹಾಯಕರ ಹುದ್ದೆಗಳಿಗೆ ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಕ್ರಮವಹಿಸಲಾಗುತ್ತಿದೆ.<br>• ಬಡ್ತಿ ಕೋಟಾದಡಿ ಖಾಲಿ ಇರುವ 60 ಪ್ರಥಮ ದರ್ಜೆ ಸಹಾಯಕರ, 274 ದ್ವಿತೀಯ ದರ್ಜೆ ಸಹಾಯಕರ ಹುದ್ದೆಗಳಿಗೆ ಹಾಗೂ 158 ಪರಿಚಾರಕರ ಹುದ್ದೆಗಳಿಗೆ ಬಡ್ತಿ ನೀಡುವ ಪ್ರಕ್ರಿಯೆ ಪ್ರಗತಿಯಲ್ಲಿರುತ್ತದೆ.<br><br>ರಾಜ್ಯದ ಖಾಸಗಿ ಅನುದಾನಿತ ಪದವಿ ಪೂರ್ವ ಕಾಲೇಜುಗಳಲ್ಲಿ ದಿನಾಂಕ:31–12–2015 ರವರೆಗೆ ನಿಧನ, ನಿವೃತ್ತಿ, ರಾಜೀನಾಮೆ ಹಾಗೂ ಇತ್ಯಾದಿ ಕಾರಣಗಳಿಂದ ತೆರವಾದ ಹುದ್ದೆಗಳ ಪೈಕಿ ನಿಗದಿತ ಕಾರ್ಯಭಾರ ಹೊಂದಿರುವ ಹುದ್ದೆಗಳಿಗೆ ಮಾತ್ರ ಭರ್ತಿ ಮಾಡಲು ಅವಕಾಶ ನೀಡಿದ್ದು, ಅದರಂತೆ ಖಾಲಿ ಇರುವ ಒಟ್ಟು 1018 ಹುದ್ದೆಗಳನ್ನು ಭರ್ತಿ ಮಾಡಲು ಕೆಳಕಂಡಂತೆ ಕ್ರಮ ಕೈಗೊಳ್ಳಲಾಗಿದೆ:<br>• ಒಟ್ಟು 1018 ಹುದ್ದೆಗಳ ಪೈಕಿ 420 ಹುದ್ದೆಗಳಿಗೆ ಆಡಳಿತ ಮಂಡಳಿಗಳಿಂದ ಪ್ರಸ್ತಾವನೆ ಸ್ವೀಕೃತಗೊಂಡಿದ್ದು, ಈಗಾಗಲೇ 412 ಹುದ್ದೆಗಳನ್ನು ಭರ್ತಿ ಮಾಡಲಾಗಿದೆ.<br>• 63 ಹುದ್ದೆಗಳನ್ನು ಕಾಲೇಜು ರದ್ದತಿ, ನ್ಯಾಯಾಲಯ ಪ್ರಕರಣ, ಇತ್ಯಾದಿಗಳಿಂದಾಗಿ ಭರ್ತಿ ಮಾಡಲು ಅವಕಾಶವಿರುವುದಿಲ್ಲ ಮತ್ತು 64 ಹುದ್ದೆಗಳ ಪ್ರಸ್ತಾವನೆಗಳಿಗೆ ಸೂಕ್ತ ಹಿಂಬರಹ / ಮಾಹಿತಿ ಕೋರಲಾಗಿದೆ.<br>• 59 ಹುದ್ದೆಗಳನ್ನು ಭರ್ತಿ ಮಾಡುವ ಪ್ರಸ್ತಾವನೆ ಪರಿಶೀಲನೆಯಲ್ಲಿದೆ. |

| | | |
|---|---|---|
| | | ಏತನ್ಮಧ್ಯೆ ರಾಜ್ಯದಲ್ಲಿ ಕೋವಿಡ್-19 ರ ಹಿನ್ನೆಲೆಯಲ್ಲಿ ಆರ್ಥಿಕ ಇಲಾಖೆಯು ದಿನಾಂಕ:06-07-2020 ರಿಂದ ದಿನಾಂಕ:23-06-2022ರವರೆಗೆ ಆರ್ಥಿಕ ನಿರ್ಬಂಧಗಳನ್ನು ಜಾರಿಗೊಳಿಸಿದ್ದರಿಂದ ಎಲ್ಲಾ ನೇರ ನೇಮಕಾತಿ ಹುದ್ದೆಗಳನ್ನು ಭರ್ತಿ ಮಾಡುವುದನ್ನು ತಡೆಹಿಡಿಯಲಾಗಿತ್ತು. ಪ್ರಸ್ತುತ ಆರ್ಥಿಕ ಇಲಾಖೆಯು ಆರ್ಥಿಕ ನಿರ್ಬಂಧಗಳನ್ನು ತೆರವುಗೊಳಿಸಿರುವುದರಿಂದ ಹುದ್ದೆಗಳ ಭರ್ತಿಗೆ ಅನುಮತಿ ನೀಡಲಾಗುತ್ತಿದೆ.<br><br>ಪ್ರಸ್ತುತ ಸರ್ಕಾರದ ಮುಖ್ಯ ಕಾರ್ಯದರ್ಶಿಯವರು ದಿ:17-11-2022 ರ ಟಿಪ್ಪಣಿಯಲ್ಲಿ ಅನುಸೂಚಿತ ಜಾತಿಗಳಿಗೆ ಮತ್ತು ಅನುಸೂಚಿತ ಪಂಗಡಗಳಿಗೆ ಹೆಚ್ಚಿಸಲಾಗಿರುವ ಮೀಸಲಾತಿಯನ್ನು ಜಾರಿಗೊಳಿಸಲು ರೋಸ್ಟರ್ ಬಿಂದುಗಳನ್ನು ಗುರುತಿಸುವ ಪ್ರಕ್ರಿಯೆ ಅಂತಿಮಗೊಳ್ಳುವವರೆಗೂ ರಾಜ್ಯಾಧೀನ ಸೇವೆಗಳಲ್ಲಿನ ನೇರ ನೇಮಕಾತಿ ಮತ್ತು ಮುಂಬಡ್ತಿ ಪ್ರಕ್ರಿಯೆಗಳನ್ನು ತಡೆಹಿಡಿಯಲು ಸೂಚಿಸಿದ್ದು, ಸದರಿ ಆದೇಶವನ್ನು ಹಿಂಪಡೆದ ನಂತರ ಪ್ರಕ್ರಿಯೆಗಳನ್ನು ಕೈಗೊಳ್ಳಲಾಗುವುದು. |

**ಸಂಖ್ಯೆ: ಇಪಿ 267 ಡಿಜಿಡಬ್ಲ್ಯೂ 2022**

(ಬಿ.ಸಿ. ನಾಗೇಶ್)
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಹಾಗೂ ಸಕಾಲ ಸಚಿವರು